ಕಾರ್ಮಿಕರು, ... ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ' ಎಂದರು.ನಾಗಪ್ಪ ಉಂಡಿ ಇದ್ದರು.

# ಶಿಕ್ಷಕರ ಪ್ರತಿಭೆಯಿಂದ ಮಕ್ಕಳ ಶೈಕ್ಷಣಿಕ ಅಭಿವೃದ್ಧಿ: ಬಸವರಾಜ ಹೊರಟ್ಟಿ

ಪ್ರಜಾವಾಣಿ ವಾರ್ತೆ



ಧಾರವಾಡದ ರಾಯಾಪುರದ ಜ್ಞಾನ ವಿಕಾಸ ತರಬೇತಿ ಸಂಸ್ಥೆಯಲ್ಲಿ ಆಯೋಜಿಸಿದ್ದ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಸಹಪಠ್ಯ ಚಟುವಟಿಕೆಗಳ ರಾಜ್ಯ ಮಟ್ಟದ ಸ್ಪರ್ಧೆ ಕಾರ್ಯಕ್ರಮದಲ್ಲಿ ಬಸವರಾಜ ಹೊರಟ್ಟಿ ಮಾತನಾಡಿದರು

**ಧಾರವಾಡ:** 'ಶಿಕ್ಷಕರ ಪ್ರತಿಭೆ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ದಾರಿ ತೋರಬೇಕು. ವಿದ್ಯಾರ್ಥಿಗಳಂತೆಯೇ ಶಿಕ್ಷಕರಿಗೂ ಸಹಪಠ್ಯ ಚಟುವಟಿಕೆಗಳು ಅವರ ವ್ಯಕ್ತಿತ್ವವನ್ನು ರೂಪಿಸುವಲ್ಲಿ ಸಹಕಾರಿಯಾಗಿವೆ' ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ಪ್ರತಿಷ್ಠಾನ, ರಾಜ್ಯ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ ಹಾಗೂ ಶಿಕ್ಷಕರ ಕಲ್ಯಾಣ ನಿಧಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯ್ತಿ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ ಆಶ್ರಯದಲ್ಲಿ ಮಂಗಳವಾರ ನಡೆದ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಸಹಪಠ್ಯ ಚಟುವಟಿಕೆಗಳ ರಾಜ್ಯ ಮಟ್ಟದ ಸ್ಪರ್ಧೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

'ಬೋಧನಾ ಕೌಶಲಗಳನ್ನು ಬಳಸಿಕೊಂಡು ಪಾಠ ಮಾಡಿದಾಗ ಮಾತ್ರ ಮಕ್ಕಳ ಕಲಿಕೆ ಪರಿಣಾಮಕಾರಿಯಾಗಿರುತ್ತದೆ. ಆಯಾ ವಿಷಯಕ್ಕೆ ತಕ್ಕಂತೆ ಪ್ರಯೋಗ, ಅಭಿನಯ, ಹಾಡುಗಾರಿಕೆ ಮೂಲಕ ಕಲಿಸಬೇಕು. ಶಿಕ್ಷಕರಿಗಾಗಿ ಆಯೋಜಿಸಿರುವ ಸ್ಪರ್ಧೆಗಳು ಅವರ ಜ್ಞಾನವನ್ನು ವಿಕಾಸ ಮಾಡುವುದರ ಜತೆಗೆ, ಮಕ್ಕಳಲ್ಲಿಯೂ ಉತ್ತಮ ಕಲಿಕೆ, ಗುಣಾತ್ಮಕ ಶಿಕ್ಷಣ ನೀಡಲು ಸಾಧ್ಯ' ಎಂದರು.

ಸಕ್ಕರೆ ಸಚಿವ ಶಂಕರ ಪಾಟೀಲ ಮುನೇನಕೊಪ್ಪ ಮಾತನಾಡಿ, 'ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿ, ಅವರಲ್ಲಿನ ಪ್ರತಿಭೆಯನ್ನು ಹೆಚ್ಚಿಸುವಲ್ಲಿ ಶಿಕ್ಷಕರ ಪಾತ್ರ ಮುಖ್ಯವಾಗಿದೆ. ಸ್ಪರ್ಧಾತ್ಮಕ ಜಗತ್ತಿನಲ್ಲಿ ಸ್ವಾವಲಂಬಿಯಾಗಿ ಜೀವನ ನಡೆಸುವ ಶಕ್ತಿಯನ್ನು ಮಕ್ಕಳಲ್ಲಿ ತುಂಬಲು ಮಾಧ್ಯಮವಾಗಿ ಕಾರ್ಯನಿರ್ವಹಿಸುವ ಶಿಕ್ಷಣವು ಎಲ್ಲರಿಗೂ ಮುಕ್ತವಾಗಿ ದೊರೆಯಬೇಕು. ಶಿಕ್ಷಕರು ತಮ್ಮ ದೈನಂದಿನ ಚಟುವಟಿಕೆ ನಡುವೆ ಸರ್ಕಾರದ ವಿವಿಧ ಯೋಜನೆಯನ್ನು ಅನುಷ್ಠಾನಗೊಳಿಸುವಲ್ಲಿ ನಿರತರಾಗಿರುತ್ತಾರೆ. ಶಿಕ್ಷಕರೂ ಸಹಪಠ್ಯ ಚಟುವಟಿಕೆಯಲ್ಲಿ ಭಾಗವಹಿಸಿ ಮಾನಸಿಕವಾಗಿ ಸದೃಢಗೊಳ್ಳಬೇಕು' ಎಂದರು.

ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಶಂಭು ಲಿಂಗನಗೌಡ ಪಾಟೀಲ, 'ಪಠ್ಯ ಬೋಧನೆಯಲ್ಲಿ ತೊಡಗಿರುವ ಅನೇಕ ಶಿಕ್ಷಕರು ವಿಭಿನ್ನ ರೀತಿಯ ಕಲೆಗಳನ್ನು ಮೈಗೂಡಿಸಿಕೊಂಡಿರುತ್ತಾರೆ. ಇನ್ನಷ್ಟು ಕ್ರಿಯಾಶೀಲರಾಗಿಸಲು ಅವರಲ್ಲಿನ ಕಲೆ ಅನಾವರಣಗೊಳ್ಳುವುದಕ್ಕೆ ಸೂಕ್ತ ವೇದಿಕೆ ಇದಾಗಿದೆ. ಸಹಪಠ್ಯ ಚಟುವಟಿಕೆಗಳು ಶಿಕ್ಷಣದ ಜ್ಞಾನ ಮತ್ತು ಗುಣಮಟ್ಟವನ್ನು ವೃದ್ಧಿಸಲು ಸಹಕಾರಿಯಾಗಿವೆ' ಎಂದರು.

ಸಾರ್ವಜನಿಕ ಶಿಕ್ಷಣ ಇಲಾಖೆಯ ಹೆಚ್ಚುವರಿ ಆಯುಕ್ತೆ ಜಯಶ್ರೀ ಶಿಂತ್ರೆ, 'ವಿದ್ಯಾರ್ಥಿಗಳ ಬೆಳವಣಿಗೆಗೆ ಮಾರ್ಗದರ್ಶನ ನೀಡುವುದು ಮಾತ್ರವಲ್ಲ, ಜೀವನವಿಡೀ ಅವರ ಕಲಿಯುವಿಕೆಗೆ ಪ್ರೇರಣೆ ನೀಡಿ ಉತ್ತಮ ನಾಗರಿಕರಂತೆ ಪರಿಶುದ್ಧರಾಗಿ ಬೆಳೆಯಲು ದಾರಿದೀಪ ಆಗುವವರೇ ನಿಜವಾದ ಶಿಕ್ಷಕ' ಎಂದರು.

ಶಿಕ್ಷಕರ ಕಲ್ಯಾಣ ನಿಧಿಯ ಉಪನಿರ್ದೇಶಕ ಡಿ. ಹನುಮಂತರಾಯ, ಎಂ.ಕೆ.ಬಿರಾದಾರ, ಎಸ್.ಕೆ.ಸಾವಕಾರ, ಜೆ.ಎಸ್.ನಂದನ, ವಿ.ಎಫ್.ಚುಳಕಿ, ಎಫ್.ವಿ.ಮಂಜಣ್ಣನವರ ಇದ್ದರು.

CamScanner